# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ನಂತರದ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಖಾಸಗಿ ಅನುದಾನಿತ ಹಾಗೂ ಮೊರಾರ್ಜಿ ದೇಸಾಯಿ ವಸತಿಶಾಲೆ, ಪದವಿ ಪೂರ್ವ ವಸತಿ ಕಾಲೇಜುಗಳ ಮತ್ತು ಆಶ್ರಮ ಶಾಲೆಗಳ ವಿದ್ಯಾರ್ಥಿಗಳಿಗೆ ಮಾಸಿಕ ಭೋಜನ ವೆಚ್ಚವನ್ನು ಹೆಚ್ಚಿಸುವ ಬಗ್ಗೆ

ಓದಲಾಗಿದೆ

1) ಸರ್ಕಾರದ ಆದೇಶ ಸಂಖ್ಯೆ: ಸಕಇ 118 ಸಮನ್ವಯ 2011, ದಿನಾಂಕ: 09/05/2011.
2) ಸರ್ಕಾರದ ಆದೇಶ ಸಂಖ್ಯೆ: ಸಕಇ 91 ಪಕವಿ 2014 ದಿನಾಂಕ: 26/06/2014.
3) ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 356 ಬಿಎಂಎಸ್ 2013(ಭಾಗ) ದಿನಾಂಕ: 24/9/2014.
4) ಆಯುಕ್ತರು, ಹಿಂ.ವ.ಕ.ಇ. ಇವರ ಪತ್ರ ಸಂಖ್ಯೆ:ಹಿಂವಕನಿ/ ವನಿಶಾ-2/ಸಿಆರ್-6/2014-15, ದಿ.31.07.2014

*****

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆಶ್ರಮ ಶಾಲೆಗಳ ಭೋಜನಾ ವೆಚ್ಚವನ್ನು ರೂ.500/- ರಿಂದ ರೂ.600/-ಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಭೋಜನಾ ವೆಚ್ಚವನ್ನು ರೂ.650/- ರಿಂದ ರೂ.750/- ಗಳಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆ/ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳ ಭೋಜನಾ ವೆಚ್ಚವನ್ನು ರೂ.750/- ರಿಂದ ರೂ.800/-ಕ್ಕೆ ಮತ್ತು ಮೆಟ್ರಿಕ ನಂತರದ ವಿದ್ಯಾರ್ಥಿ ನಿಲಯಗಳ ಭೋಜನಾ ವೆಚ್ಚವನ್ನು ರೂ.750/- ರಿಂದ ರೂ.850/-ಕ್ಕೆ ಹೆಚ್ಚಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯದ ಅಡಿಯಲ್ಲಿ ಬರುವ ಸರ್ಕಾರದ ವಸತಿ ಶಾಲೆಗಳು/ಆಶ್ರಮ ಶಾಲೆಗಳ ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿಯ ಭೋಜನಾ ವೆಚ್ಚವನ್ನು ದಿನಾಂಕ : 01/07/2014 ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಿ ಆದೇಶಿಸಲಾಗಿದೆ.

ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಆಶ್ರಮ ಶಾಲೆಗಳ ಭೋಜನಾ ವೆಚ್ಚವನ್ನು ರೂ.600/- ರಿಂದ ರೂ.700/-ಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಭೋಜನಾ ವೆಚ್ಚವನ್ನು ರೂ.750/- ರಿಂದ ರೂ.900/- ಗಳಿಗೆ, ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ/ವಸತಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ರೂ.850/- ರಿಂದ 1000/-ಕ್ಕೆ ಹೆಚ್ಚಿಸಲಾಗಿದೆ.

ಮೇಲೆ ಓದಲಾದ(4)ರಲ್ಲಿ ಓದಲಾದ ಪತ್ರದಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆರವರು 2014-15ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-171ರಲ್ಲಿ 'Monthly food charges given to students in Grant-in-aid Pre-matric and Post-matric and Post matric hostels will be enhanced from Rs.500/- to Rs.600/- to Rs.800/- respectively' ಎಂದು ಘೋಷಿಸಲಾಗಿದೆ. ಈ ಕಾರಣದಿಂದಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಖಾಸಗಿ ಅನುದಾನಿತ ಮೆಟ್ರಿಕ್-ಪೂರ್ವ

ವಿದ್ಯಾರ್ಥಿನಿಲಯಗಳಲ್ಲಿಯ ಪ್ರತಿ ವಿದ್ಯಾರ್ಥಿಗೆ ಮಾಸೆಯಾನ ಬೋಜನಾ ವೆಚ್ಚವನ್ನು ರೂ.500/- ರಿಂದ 700/- ರವರೆಗೆ ಮತ್ತು ಖಾಸಗಿ ಅನುದಾನಿತ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿಯ ಪ್ರತಿ ವಿದ್ಯಾರ್ಥಿಗೆ ಮಾಹೆಯಾನ ರೂ.600/- ರಿಂದ ರೂ.800/-ರವರೆಗೆ ಹೆಚ್ಚಿಸಬೇಕಾಗಿರುತ್ತದೆ.

ಆದ್ದರಿಂದ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಹಾಗೂ ಖಾಸಗಿ ಅನುದಾನಿತ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ, ಆಶ್ರಮ ಶಾಲೆಗಳ, ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ, ಪದವಿ ಪೂರ್ವ ವಸತಿ ಕಾಲೇಜು ವಿದ್ಯಾರ್ಥಿಗಳ ಮಾಸಿಕ ಭೋಜನಾ ವೆಚ್ಚದ ದರಗಳನ್ನು ಹೆಚ್ಚಿಸಿದಲ್ಲಿ ರೂ.3239.56 ಲಕ್ಷ ಹೆಚ್ಚುವರಿ ಅನುದಾನ ಬೇಕಾಗುತ್ತದೆ. ಜಿಲ್ಲಾವಾರು, ಲೆಕ್ಕಶೀರ್ಷಿಕೆವಾರು ಹೆಚ್ಚುವರಿ ಬಿಡುಗಡೆ ಮಾಡಬೇಕಾಗಿರುವ ಅನುದಾನದ ವಿವರಗಳ ಪ್ರಸ್ತಾವನೆಯನ್ನು ಪ್ರತ್ಯೇಕವಾಗಿ ಸಲ್ಲಿಸುವುದಾಗಿ ತಿಳಿಸಿರುವ ಪ್ರಯುಕ್ತ ದಿ.1.7.2014 ರಿಂದ ಅನ್ವಯಿಸುವಂತೆ ಈ ಕೆಳಗಿನ ದರ್ಗಳಂತೆ ಮಾಸಿಕ ಭೋಜನ ವೆಚ್ಚದ ದರಗಳನ್ನು ಹೆಚ್ಚಿಸಿ ಆದೇಶವನ್ನು ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂ:ಬಿಸಿಡಬ್ಲ್ಯೂ 293 ಬಿಎಂಎಸ್ 2014, ಬೆಂಗಳೂರು, ದಿನಾಂಕ: 07.10.2014**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸರ್ಕಾರಿ, ಮೆಟ್ರಿಕ್ ನಂತರದ ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ/ವಸತಿ ಕಾಲೇಜುಗಳ ಮತ್ತು ಆಶ್ರಮ ಶಾಲೆಗಳ ವಿದ್ಯಾರ್ಥಿಗಳಿಗೆ, ಮಾಸಿಕ ಭೋಜನಾ ವೆಚ್ಚವನ್ನು ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿದೆ.

| ಕ್ರ ಸಂ. | ವಿವರ | ಹಾಲಿ ಜಾರಿಯಲ್ಲಿರುವ ಮಾಹೆಯಾನ ಭೋಜನದ ದರ | ಪರಿಷ್ಕರಿಸಲಾದ ಮಾಹೆಯಾನ ಭೋಜನದ ದರ |
|---|---|---|---|
| 1 | ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ | ರೂ.900/- | ರೂ.1000/- |
| 2 | ಸರ್ಕಾರಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಹಾಗೂ ವಸತಿ ಶಾಲೆ/ ವಸತಿ ಕಾಲೇಜುಗಳ ವಿದ್ಯಾರ್ಥಿಗಳಿಗೆ | ರೂ.1000/- | ರೂ.1100/- |
| 3 | ಸರ್ಕಾರದ ಆಶ್ರಮ ಶಾಲೆಗಳು | ರೂ.700/- | ರೂ.800/- |

ಇದಕ್ಕೆ ತಗಲುವ ವೆಚ್ಚವನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಗಳಡಿ ಒದಗಿಸುವ ಅನುದಾನದಿಂದ ಭರಿಸತಕ್ಕದ್ದು.

1) ಜಿಲ್ಲಾವಲಯ ಯೋಜನೆ/ಯೋಜನೇತರ ಲೆಕ್ಕಶೀರ್ಷಿಕೆ 2225-00-103-0-26(ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ)
2) ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-53 ಮತ್ತು 2225-03-277-3-10 (ಮೆಟ್ರಿಕ್-ಪೂರ್ವ ಮತ್ತು ಮೆಟ್ರಿಕ್-ನಂತರದ ವಿದ್ಯಾರ್ಥಿಗಳಿಗೆ)

3) ಜಿಲ್ಲಾವಲಯ ಯೋಜನೇತರ ಲೆಕ್ಕಶೀರ್ಷಿಕೆ 2225-00-103-0-41 (ಆಶ್ರಮ ಶಾಲೆಯ ವಿದ್ಯಾರ್ಥಿಗಳಿಗೆ)

4) ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225-03-277-2-62 (ಮೊರಾರ್ಜಿ ದೇಸಾಯಿ ವಸತಿಶಾಲೆಗಳ ಪ್ರಾರಂಭ ಮತ್ತು ನಿರ್ವಹಣೆ)

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 689 ವೆಚ್ಚ-3/2014, ದಿನಾಂಕ:27.09.2014ರಲ್ಲಿ ನೀಡಿದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್.ಆರ್.ಎರೆಕುಪ್ಪಿ)
ಸರ್ಕಾರದ ಅಧೀನ ಕಾರ್ಯದರ್ಶಿ-2(ಪ್ರ)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಪ್ರತಿಯನ್ನು :

1. ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕ ಪರಿಶೋಧನೆ-1 ಮತ್ತು 2), ಕರ್ನಾಟಕ ಬೆಂಗಳೂರು
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಅಧೀನ ಕಾರ್ಯದರ್ಶಿಗಳು (ವೆಚ್ಚ-3 ಮತ್ತು 9) ಆರ್ಥಿಕ ಇಲಾಖೆ, ವಿಧಾನ ಸೌಧ.
4. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು ವಿಕಾಸ ಸೌಧ.
6. ಸರ್ಕಾರದ ಅಧೀನ ಕಾರ್ಯದರ್ಶಿ-1 ಮತ್ತು 2, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸ ಸೌಧ.
7. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.